# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 08-03-2018**

## ಪತ್ರಿಕಾ ಪ್ರಕಟಣೆಗಾಗಿ

ವಿಜಯಪುರ: ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಮುಖ್ಯ ದ್ವಾರದ ಎಡಭಾಗದಲ್ಲಿ ಕೆರೆಯ ಅಭಿವೃದ್ಧಿ ಕಾಮಗಾರಿಗೆ ಬುಧವಾರ ವಿಧಾನ ಪರಿಷತ್ ಸದಸ್ಯ ಅರುಣ ಶಹಾಪೂರ ಭೂಮಿಪೂಜೆ ಮತ್ತು ಗುದ್ದಲಿ ಪೂಜೆ ನೆರವೇರಿಸಿದರು.

ಸುಮಾರು 2.0 ಎಕರೆ ವಿಸ್ತೀರ್ಣ ಹೊಂದಿದ ಈ ಕೆರೆಯ ಕಾಮಗಾರಿಗೆ ಚಿತ್ರದುರ್ಗ ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ರೂ.37 ಲಕ್ಷ ಅನುದಾನ ಬಿಡುಗಡೆಯಾಗಿದೆ.

ಮೂರು ಹಂತದ ಈ ಕಾಮಗಾರಿಯ, ಮೊದಲ ಹಂತದ ಅಂದಾಜು ವೆಚ್ಚ ರೂ.58 ಲಕ್ಷಗಳಾಗಿದ್ದು, ಉಳಿದ ವೆಚ್ಚವನ್ನು ವಿಶ್ವವಿದ್ಯಾನಿಯದಿಂದ ಭರಿಸಲಾಗುತ್ತದೆ. ಈ ಕಾಮಗಾರಿಯನ್ನು ನಿರ್ವಹಿಸಲು ಜಿಲ್ಲೆಯ ಕೆ.ಆರ್.ಐ.ಡಿ.ಎಲ್ ಅವರಿಗೆ ವಹಿಸಲಾಗಿದೆ ಎಂದು ವಿವಿಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ, ಕುಲಸಚಿವ ಪ್ರೊ.ಎಲ್.ಆರ್. ನಾಯಕ, ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಬಿ. ಮಾಡಗಿ, ಕೆಆರ್ಐಡಿಎಲ್‌ನ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಬಿ.ಕೆ.ಪಾಟೀಲ, ಮಹಿಳಾ ವಿವಿ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಾಶ ಜಿರಲಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

**ಫೋಟೋ ಕ್ಯಾಪ್ಷನ್:**

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಮುಖ್ಯ ದ್ವಾರದ ಎಡಭಾಗದಲ್ಲಿ ಕೆರೆಯ ಅಭಿವೃದ್ಧಿ ಕಾಮಗಾರಿಗೆ ಬುಧವಾರ ವಿಧಾನ ಪರಿಷತ್ ಸದಸ್ಯ ಅರುಣ ಶಹಾಪೂರ ಭೂಮಿಪೂಜೆ ಮತ್ತು ಗುದ್ದಲಿ ಪೂಜೆ ನೆರವೇರಿಸಿದರು.**

